# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 490 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 19.07.2024. |
| ಉತ್ತರಿಸುವವರು | : | ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳ ಸಂಖ್ಯೆ ಹಾಗೂ ಅವುಗಳಲ್ಲಿರುವ ಸದಸ್ಯರುಗಳ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಒಟ್ಟು ಗ್ರಾಮ ಪಂಚಾಯತಿಗಳು **-5950.**<br><br>ಪ್ರಸ್ತುತ ಗ್ರಾಮ ಪಂಚಾಯತಿಗಳಲ್ಲಿರುವ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳ ವಿವರ ಈ ಕೆಳಕಂಡಂತಿದೆ.<br><br>ಗ್ರಾಮ ಪಂಚಾಯತಿ ಅಧ್ಯಕ್ಷರು: **5882**<br>ಗ್ರಾಮ ಪಂಚಾಯತಿ ಉಪಾಧ್ಯಕ್ಷರು: **5881**<br>ಗ್ರಾಮ ಪಂಚಾಯತಿ ಸದಸ್ಯರು: **82,049**<br>**ಒಟ್ಟು**: **93,812** |
| ಆ) | ಪಂಚಾಯತಿ ಸದಸ್ಯರುಗಳಿಗೆ ಅನುಕೂಲವಾಗುವಂತೆ ಕೂಡಲೇ ಉಚಿತ ಬಸ್ ಪಾಸ್ ಹಾಗೂ ಆರೋಗ್ಯ ವಿಮಾ ಯೋಜನೆ ಜಾರಿಗೆ ತರಲು ಸರ್ಕಾರ ಕೈಗೊಳ್ಳುವ ಕ್ರಮಗಳಾವುವು; | ಪಂಚಾಯತಿ ಸದಸ್ಯರುಗಳಿಗೆ ಉಚಿತ ಬಸ್ ಪಾಸ್ ಹಾಗೂ ಆರೋಗ್ಯ ವಿಮಾ ಯೋಜನೆ ಜಾರಿಗೆ ತರಲು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರಲ್ಲಿ ಅವಕಾಶವಿರುವುದಿಲ್ಲ.<br><br>ಗ್ರಾಮ ಪಂಚಾಯತಿ ಕೆಲಸಗಳ ನಿಮಿತ್ತ ಗ್ರಾಮ ಪಂಚಾಯತಿ ಪರಿಮಿತಿಗಳಾಚೆ ಮಾಡಿದ ಪ್ರಯಾಣಗಳಿಗಾಗಿ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿ ಅಧ್ಯಕ್ಷ, ಉಪಾಧ್ಯಕ್ಷ ಮತ್ತು ಸದಸ್ಯರುಗಳ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ) ನಿಯಮಗಳು, 1994 ರನ್ವಯ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆ ಪಡೆಯಲು ಅವಕಾಶ ಕಲ್ಪಿಸಲಾಗಿದೆ. |

ಸಂಖ್ಯೆ: ಗ್ರಾಅಪ 321 ಗ್ರಾಪಂಅ 2024

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.